# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 81 (93) |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 11.08.2025 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯದಲ್ಲಿ ಒಟ್ಟು 17 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಿವೆ. ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ-1** ರಲ್ಲಿ ಒದಗಿಸಲಾಗಿದೆ. |
| ಆ) | ಸದರಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಬೋಧಕ ಹಾಗೂ ಬೋಧಕೇತರ ಮತ್ತು ಹೊರಗುತ್ತಿಗೆ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಹುದ್ದೆವಾರು ಮಾಹಿತಿ ನೀಡುವುದು) | ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಖಾಯಂ 345 ಬೋಧಕ ಹಾಗೂ 133 ಬೋಧಕೇತರ ಸಿಬ್ಬಂದಿಗಳು, ಜೊತೆಗೆ, 186 ಹೊರಗುತ್ತಿಗೆ ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆ.<br><br>ಹುದ್ದೆವಾರು ಮಾಹಿತಿಯನ್ನು **ಅನುಬಂಧ-2 ರಲ್ಲಿ** ಒದಗಿಸಲಾಗಿದೆ. |
| ಇ) | ಸದರಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಸಂಖ್ಯೆ ಎಷ್ಟು; ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಳ್ಳಲು ಇರುವ ನಿಯಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 421 ಅತಿಥಿ ಉಪನ್ಯಾಸಕರು ಕಾರ್ಯ ನಿರ್ವಹಿಸುತ್ತಿದ್ದಾರೆ.<br><br>2025-26ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರ ನೇಮಕಾತಿಗೆ ಸಂಬಂಧಿಸಿದಂತೆ ಮಾರ್ಗಸೂಚಿ ಹಾಗೂ ಅರ್ಹತಾ ಮಾನದಂಡಗಳನ್ನು ಒಳಗೊಂಡಂತೆ ದಿನಾಂಕ: 17.07.2025 ಹಾಗೂ 25.07.2025 ರಂದು ಪ್ರಕಟಣೆ ಹೊರಡಿಸಲಾಗಿದೆ.<br><br>**ಪ್ರಕಟಣೆಯ ಪ್ರತಿಗಳನ್ನು ಅನುಬಂಧ-3 ರಲ್ಲಿ ಒದಗಿಸಲಾಗಿದೆ.** |
| ಈ) | ಅತಿಥಿ ಉಪನ್ಯಾಸಕರುಗಳಿಗೆ ಗೌರವ ಧನ ಯಾವಾಗ ಹೆಚ್ಚಿಸಲಾಗಿದೆ; ಪ್ರಸ್ತುತ ಹೆಚ್ಚಿಸುವ ಹಾಗೂ ಇನ್ನಿತರ | ಸರ್ಕಾರದ ಆದೇಶ ಸಂಖ್ಯೆ: ಇಡಿ 122 ಡಿಟಿಇ 2023, ದಿನಾಂಕ: 27.09.2024 ರಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ |

| | | |
|---|---|---|
| | ಸೌಲಭ್ಯಗಳನ್ನು ಒದಗಿಸುವ ಚಿಂತನೆ ಸರ್ಕಾರಕ್ಕಿದೆಯೇ? | ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಗೌರವ ಧನವನ್ನು ಹೆಚ್ಚಿಸಲಾಗಿದೆ.<br><br>**ಆದೇಶದ ಪ್ರತಿಯನ್ನು ಅನುಬಂಧ-4 ರಲ್ಲಿ ಒದಗಿಸಲಾಗಿದೆ.**<br><br>ಮುಂದುವರೆದು, ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ, 60 ವರ್ಷ ಮೀರಿದ ನಂತರ ಇವರಿಗೆ ಭದ್ರತಾ ರೂಪದಲ್ಲಿ ಅವರುಗಳು ಸಲ್ಲಿಸಿರುವ ಸೇವಾ ಅವಧಿ ಪರಿಗಣಿಸಿ ವಾರ್ಷಿಕ ರೂ.50,000/- ರಂತೆ ಗರಿಷ್ಠ ರೂ.5,00,000/- ಮೊತ್ತದ ಇಡಿಗಂಟು ಸೌಲಭ್ಯವನ್ನು ಕಲ್ಪಿಸಲಾಗಿದೆ.<br><br>ಅತಿಥಿ ಉಪನ್ಯಾಸಕರ ಆರೋಗ್ಯದ ದೃಷ್ಟಿಯಿಂದ ವಾರ್ಷಿಕ ರೂ.5.00 ಲಕ್ಷಗಳ ಆರೋಗ್ಯ ವಿಮಾ ಸೌಲಭ್ಯವನ್ನು ನೀಡುವ ನಿಟ್ಟಿನಲ್ಲಿ ಅರೆಕಾಲಿಕ ಉಪನ್ಯಾಸಕರಿಂದ ವಂತಿಗೆ ರೂಪದಲ್ಲಿ ಮಾಸಿಕ ರೂ.400/- ಸ್ವೀಕರಿಸಿ ಅಷ್ಟೇ ಮೊತ್ತದ ವಂತಿಗೆಯನ್ನು ಸರ್ಕಾರದಿಂದ ಭರಿಸಿ ಆರೋಗ್ಯ ವಿಮಾ ಸೌಲಭ್ಯವನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದೆ.<br><br>ಜೊತೆಗೆ, ಅತಿಥಿ ಉಪನ್ಯಾಸಕರಿಗೆ ಮಾಹೆಯಾನ ಒಂದು ಸಾಂದರ್ಭಿಕ ರಜೆಯನ್ನು ಪಡೆಯಲು ಅನುಮತಿ ನೀಡಲಾಗಿದೆ. |

**ಸಂಖ್ಯೆ: ಇಡಿ 64 ಟಿಜಿಎಲ್ 2025**

Sudhakar MC

**(ಡಾ.ಎಂ.ಸಿ. ಸುಧಾಕರ್)**

ಉನ್ನತ ಶಿಕ್ಷಣ ಸಚಿವರು

## ಅನುಬಂಧ-1

| ಕ್ರ ಸ | ಸಂಸ್ಥೆಯ ಹೆಸರು | ಜಿಲ್ಲೆಯ ಹೆಸರು |
|---|---|---|
| 1. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ಎಸ್ ಕೆ ಎಸ್ ಜೆ ಟಿ ಐ ಬೆಂಗಳೂರು | ಬೆಂಗಳೂರು |
| 2. | ಸರ್ಕಾರಿ ಸಂಜೆ ಇಂಜಿನಿಯರಿಂಗ್ ಕಾಲೇಜ್ ಎಸ್ ಕೆ ಎಸ್ ಜೆ ಟಿ ಐ ಬೆಂಗಳೂರು | ಬೆಂಗಳೂರು |
| 3. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ರಾಯಚೂರು | ರಾಯಚೂರು |
| 4. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ಅರಸೀಕರೆ. | ಹಾಸನ |
| 5. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ಹಾವೇರಿ | ಹಾವೇರಿ |
| 6. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ಹೂವಿನಹಡಗಲಿ | ಬಳ್ಳಾರಿ |
| 7. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ಚಳ್ಳಕೆರೆ | ಚಿತ್ರದುರ್ಗ |
| 8. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ಬೀದರ್ | ಬೀದರ್ |
| 9. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ಹಾಸನ | ಹಾಸನ |
| 10. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ಮೂಸಳೆಹೊಸಹಳ್ಳಿ | ಹಾಸನ |
| 11. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ಚಾಮರಾಜನಗರ | ಚಾಮರಾಜನಗರ |
| 12. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ಕೆ ಆರ್ ಪೇಟೆ | ಕೆ ಆರ್ ಪೇಟೆ |
| 13. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ಕುಶಾಲನಗರ | ಕುಶಾಲನಗರ |
| 14. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ರಾಮನಗರ | ರಾಮನಗರ |
| 15. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ಕಾರವಾರ | ಕಾರವಾರ |
| 16. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ಗಂಗಾವತಿ | ಕೊಪ್ಪಳ |
| 17. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ತಳಕಲ್ | ಕೊಪ್ಪಳ |

**ರಿಜಿಸ್ಟ್ರಾರ್**
ತಾಂತ್ರಿಕ ಶಿಕ್ಷಣ ಇಲಾಖೆ



ile No. ED/64/TGL/2025-ED_SO_TECH-EDUCATION HIGHER SEC (Computer No. 1862379)
enerated from eOffice by PRUTHVIRAJ M R, ED-ASST-TECH(MRP), ASSISTANT, EDUCATION HIGHER DEPARTMENT

Scanned with CamScanner

# ಅನುಬಂಧ-2

| ಕ್ರ.ಸ | ಹುದ್ದೆಯ ಪದನಾಮ | ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ |
|---|---|---|
| | **ಬೋಧಕ ಹುದ್ದೆಗಳು** | |
| 1. | ಪ್ರಾಂಶುಪಾಲರು | 3 |
| 2. | ಪ್ರಾಧ್ಯಾಪಕರು | 40 |
| 3. | ಸಹ ಪ್ರಾಧ್ಯಾಪಕರು | 134 |
| 4. | ಸಹಾಯಕ ಪ್ರಾಧ್ಯಾಪಕರು | 155 |
| 5. | ಸಹಾಯಕ ದೈಹಿಕ ಶಿಕ್ಷಣ ಮತ್ತು ಕ್ರೀಡಾ ನಿರ್ದೇಶಕರು | 6 |
| 6. | ಪ್ಲೇಸ್‌ಮೆಂಟ್ & ಟ್ರೈನಿಂಗ್ ಆಫೀಸರ್ | 0 |
| 7. | ಗ್ರಂಥಪಾಲಕರು | 7 |
| | ಒಟ್ಟು | 345 |
| | **ಬೋಧಕೇತರ ಹುದ್ದೆಗಳು** | |
| 8. | ರಿಜಿಸ್ಟ್ರಾರ್ | 10 |
| 9. | ಅಧೀಕ್ಷಕರು | 33 |
| 10. | ಪ್ರಥಮ ದರ್ಜೆ ಸಹಾಯಕರು | 26 |
| 11. | ಶೀಘ್ರಲಿಪಿಗಾರರು | 6 |
| 12. | ದ್ವಿತೀಯ ದರ್ಜೆ ಸಹಾಯಕರು | 16 |
| 13. | ದತ್ತಾಂಶ ನಮೂದು ಸಹಾಯಕರು | 3 |
| 14. | ಫೋರ್‌ಮನ್ | 5 |
| 15. | ಬೋಧಕರು | 12 |
| 16. | ಸಹಾಯಕ ಬೋಧಕರು | 8 |
| 17. | ಮೆಕ್ಯಾನಿಕ್ | 6 |
| 18. | ಕಾರ್ಯಗಾರ ಸಹಾಯಕರು | 2 |
| 19. | ಕಚೇರಿ ಸಹಾಯಕರು | 5 |
| 20. | ಗುಂಪು-ಡಿ | 1 |
| | ಒಟ್ಟು | 133 |
| | ಒಟ್ಟಾರೆ | **478** |
| 21. | ಗುಂಪು-ಡಿ ಹೊರಗುತ್ತಿಗೆ ಮೇರೆಗೆ | **186** |

ರಿಜಿಸ್ಟ್ರಾರ್
ತಾಂತ್ರಿಕ ಶಿಕ್ಷಣ ಇಲಾಖೆ



File No. ED/64/TGL/2025-ED_SO_TECH-EDUCATION HIGHER SEC (Computer No. 1862379)
Scanned with CamScanner
Generated from eOffice by PRUTHVIRAJ M R, ED-ASST-TECH(MRP), ASSISTANT, EDUCATION HIGHER DEPARTMENT

6ನಂ2024-3

ಕರ್ನಾಟಕ ಸರ್ಕಾರ
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಡಿಟಿಇ/16/ಇಎಸ್‌ಟಿ(3)/2025

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು-560 001
ದಿನಾಂಕ: 25.07.2025

## ಪ್ರಕಟಣೆ-2

ವಿಷಯ: 2025-26ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ

ಉಲ್ಲೇಖ:
1. ಸರ್ಕಾರದ ಪತ್ರ ಸಂಖ್ಯೆ: ಇಡಿ 122 ಡಿಟಿಇ 2023, ದಿನಾಂಕ:12.08.2024 ಮತ್ತುದಿ:27.09.2024.
2. ಸರ್ಕಾರದ ಪತ್ರ ಸಂಖ್ಯೆ: ಇಡಿ 11 ಡಿಟಿಇ 2025, ದಿನಾಂಕ:22.04.2025.
3. ಈ ಕಚೇರಿ ಪ್ರಕಟಣೆ ದಿ: 17.07.2025.

*******

2025-26ನೇ ಶೈಕ್ಷಣಿಕ ಸಾಲಿನಲ್ಲಿ ಇಲಾಖಾ ವ್ಯಾಪ್ತಿಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನು ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಿಕೊಳ್ಳಲು ಉಲ್ಲೇಖ(3) ರಲ್ಲಿ ಪ್ರಕಟಣೆ ಹೊರಡಿಸಲಾಗಿದೆ. ಸದರಿ ಪ್ರಕಟಣೆಗೆ ಈ ಕೆಳಕಂಡ ಮಾನದಂಡಗಳನ್ನು ಸೇರ್ಪಡೆಗೊಳಿಸಲಾಗಿದೆ.

1. 2024-25 ನೇ ಸಾಲಿನಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸಿ 2025-26ನೇ ಸಾಲಿಗೆ ಅತಿಥಿ ಉಪನ್ಯಾಸಕರ ಸೇವೆಗೆ ಅರ್ಜಿ ಸಲ್ಲಿಸಿ ಹಾಗೂ ಹಿಂದಿನ ಸಾಲಿನಲ್ಲಿ ಕರ್ತವ್ಯ ನಿರ್ವಹಿಸಿದ ಸಂಸ್ಥೆಯಲ್ಲಿಯೇ ಮುಂದುವರಿಯಲು ಇಚ್ಛಿಸುವ ಅಭ್ಯರ್ಥಿಗಳಿಂದ ಅಭಿಮತ ಪತ್ರವನ್ನು ಪಡೆದು AICTE ನಿಯಮ/ಕಾರ್ಯಭಾರದ ಲಭ್ಯತೆ ಅನುಸಾರವಾಗಿ ಸದರಿ ಸಂಸ್ಥೆಯಲ್ಲಿನ ಖಾಲಿ ಇರುವ ಹುದ್ದೆಗಳ ಅನುಸಾರವಾಗಿ ಅದೇ ಸಂಸ್ಥೆಯಲ್ಲಿ ಮುಂದುವರೆಯಲು ಅವಕಾಶ ಕಲ್ಪಿಸಲಾಗುವುದು ಹಾಗೂ ಮುಂದುವರೆಯಲು/ಇಚ್ಛಿಸದಿದ್ದಲ್ಲಿ ಪ್ರಾಂಶುಪಾಲರು ಮಾಹಿತಿಯನ್ನು ಆನ್‌ಲೈನ್‌ಲ್ಲಿ ನಮೂದಿಸುವುದು.
2. 2024-2025 ನೇ ಸಾಲಿನಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸಿದ ಅಭ್ಯರ್ಥಿಗಳನ್ನು ಕೌನ್ಸಲಿಂಗ್ ವೇಳೆಗೆ ಸಂಸ್ಥೆಯ ಪ್ರಾಂಶುಪಾಲರಿಂದ ಪಡೆದ ಕಾರ್ಯಭಾರದ ಮಾಹಿತಿಯನ್ನು ಆಧರಿಸಿ 2024-2025 ನೇ ಸಾಲಿನಲ್ಲಿ ಕಾರ್ಯ ನಿರ್ವಹಿಸಿದ ಸಂಸ್ಥೆಯಲ್ಲಿ 2025-2026 ನೇ ಸಾಲಿನಲ್ಲಿಯೂ ಮುಂದುವರೆಯಲು ಇಚ್ಛಿಸಿರುವ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಲಾಗುವುದು.
3. ಮೊದಲನೇ ಸುತ್ತಿನ ಕೌನ್ಸಿಲಿಂಗ್ ನಂತರವೂ ಖಾಲಿ ಇರುವ ಹುದ್ದೆಗಳಿಗೆ ಮುಂದಿನ ಸುತ್ತಿನ ಕೌನ್ಸಿಲಿಂಗ್ ಮೂಲಕ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲಾಗುವುದು.
4. ಅಭ್ಯರ್ಥಿಗಳು ಅತಿಥಿ ಉಪನ್ಯಾಸಕರಾಗಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು/ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳು/ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರಿಂದ ನಿಗಧಿತ ನಮೂನೆಯಲ್ಲಿ ಪಡೆದು, ಸದರಿ ಸೇವಾ ಶಾಲೆಗಳಲ್ಲಿ ಈ ಹಿಂದೆ ಸಲ್ಲಿಸಿರುವ ಸೇವೆಯ ಸೇವಾನುಭವ ವಿವರಗಳನ್ನು ವಿವರಗಳನ್ನು ಪ್ರಾಂಶುಪಾಲರುಗಳು ಪರಿಶೀಲಿಸಿ ಆನ್‌ಲೈನ್ ಅರ್ಜಿಯಲ್ಲಿ ಯಥಾವತ್ತಾಗಿ ನಮೂದಿಸುವುದು.

a. ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಈ ಹಿಂದೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿರುವ ಅವಧಿಯನ್ನು ಇಂಜಿನಿಯರಿಂಗ್ ಕಾಲೇಜುಗಳ ಕೌನ್ಸಲಿಂಗ್ ಗೆ ಮಾತ್ರ ಪರಿಗಣಿಸಲಾಗುವುದು.
b. ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಈ ಹಿಂದೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿರುವ ಅವಧಿಯನ್ನು ಪಾಲಿಟೆಕ್ನಿಕ್ ಕಾಲೇಜುಗಳ ಕೌನ್ಸಲಿಂಗ್ ಗೆ ಮಾತ್ರ ಪರಿಗಣಿಸಲಾಗುವುದು.
c. ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಈ ಹಿಂದೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿರುವ ಅವಧಿಯನ್ನು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಕೌನ್ಸಲಿಂಗ್ ಗೆ ಮಾತ್ರ ಪರಿಗಣಿಸಲಾಗುವುದು.

**ಪರಿಷ್ಕೃತ ಆಯ್ಕೆ ಪ್ರಕ್ರಿಯೆಯ ವೇಳಾಪಟ್ಟಿ:**



File No. ED/64/TGL/2025-ED_SO_TECH-EDUCATION HIGHER SEC (Computer No. 1862379)
Generated from eOffice by PRUTHVIRAJ M P, ED-ASST-TECH(MPP), ASSISTANT, EDUCATION HIGHER DEPARTMENT on 07/08/2025 03:16 PM

| ಕ್ರ ಸಂ. | ವಿವರ | ದಿನಾಂಕ |
|---|---|---|
| 1. | ಆನ್‌ಲೈನ್ ಮೂಲಕ EDIT ಮಾಡಲು ಅಂತಿಮ ದಿನಾಂಕ: (ಪ್ರಾಂಶುಪಾಲರ ಮುಖಾಂತರ) | 28.07.2025 |
| 2. | Retain list ಅನ್ನು ಪ್ರಕಟಿಸುವ ದಿನಾಂಕ: | 29.07.2025 |
| 3. | ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟಿಸುವ ದಿನಾಂಕ: | 30.07.2025 |
| 4. | AICTE ನಿಯಮಾನುಸಾರ ಕಾರ್ಯಭಾರಕ್ಕನುಗುಣವಾಗಿ ಅಭ್ಯರ್ಥಿಗಳ ಅಂತಿಮ ಮೆರಿಟ್ ಪಟ್ಟಿ ಪ್ರಕಟಿಸುವ ದಿನಾಂಕ: | 01.08.2025 |
| 5. | ಮೆರಿಟ್ ಪಟ್ಟಿಯನ್ವಯ ಸಂಸ್ಥೆ ಆಯ್ಕೆ ಕೌನ್ಸಿಲಿಂಗ್ ನಡೆಸುವ ಹಾಗೂ ಕೌನ್ಸಿಲಿಂಗ್‌ನಲ್ಲಿ ಸಂಸ್ಥೆಯನ್ನು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸುವ ದಿನಾಂಕ: | 02.08.2025 ರಿಂದ 04.08.2025 |

Manjushree

ಆಯುಕ್ತರು
ಕಾಲೇಜು & ತಾಂತ್ರಿಕ ಶಿಕ್ಷಣ
ಇಲಾಖೆ ಬೆಂಗಳೂರು

**ಇವರಿಗೆ,**

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆಯ, ಬೆಂಗಳೂರು.
2. ಜಂಟಿ ನಿರ್ದೇಶಕರು, ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆಯ, ಬೆಂಗಳೂರು.
3. ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರುಗಳಿಗೆ.
4. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ತಾ.ಶಿ.ಇ ಕಛೇರಿ, ಬೆಂ. – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.

**ಪ್ರತಿಯನ್ನು,**

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂ. - ಮಾನ್ಯ ಸಚಿವರ ಅವಗಾಹನೆಗೆ ತರಲು ಕೋರಿದೆ.
2. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಕಛೇರಿ ಪ್ರತಿ.



ile No. ED/64/TGL/2025-ED_SO_TECH-EDUCATION HIGHER SEC (Computer No. 1862379)
enerated from eOffice by PRUTHVIRAJ M R, ED-ASST-TECH(MRP), ASSISTANT, EDUCATION HIGHER DEPARTMENT on 07/08/2025 03:16 PM

ಕರ್ನಾಟಕ ಸರ್ಕಾರ
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಡಿಟಿಇ/16/ಇಎಸ್‌ಟಿ(3)/2025

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು-560 001
ದಿನಾಂಕ: 17.07.2025

## ಪ್ರಕಟಣೆ

ವಿಷಯ: 2025-26ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: (1) ಸರ್ಕಾರದ ಪತ್ರ ಸಂಖ್ಯೆ: ಇಡಿ 122 ಡಿಟಿಇ 2023, ದಿನಾಂಕ:12.08.2024 ಮತ್ತುದಿ:27.09.2024.
(2) ಸರ್ಕಾರದ ಪತ್ರ ಸಂಖ್ಯೆ: ಇಡಿ 11 ಡಿಟಿಇ 2025, ದಿನಾಂಕ:22.04.2025.

* * * * * * *

2025-26ನೇ ಶೈಕ್ಷಣಿಕ ಸಾಲಿನಲ್ಲಿ ಇಲಾಖಾ ವ್ಯಾಪ್ತಿಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಿಕೊಳ್ಳಲು ಉದ್ದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಇಡಿ 122 ಡಿಟಿಇ 2023, ದಿನಾಂಕ:12.08.2024 ಮತ್ತುದಿ:27.09.2024 ರಲ್ಲಿ ಅತಿಥಿ ಉಪನ್ಯಾಸಕರ ಗೌರವಧನ ಹೆಚ್ಚಿಸಿದ್ದು, ಕಂಡಿಕೆ (3) ರಲ್ಲಿ "ಎಐಸಿಟಿಇ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರಿಗೆ ನಿಗಧಿತ ವಿದ್ಯಾರ್ಹತೆಯನ್ನು ಹೊಂದಲು 4 ವರ್ಷಗಳ ಕಾಲಾವಧಿ ನೀಡುವುದು, 4 ವರ್ಷಗಳ ನಂತರ ಎಐಸಿಟಿಇ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರ ನೇಮಕಾತಿಯನ್ನು ಸಂಪೂರ್ಣವಾಗಿ ನಿರ್ಬಂಧಿಸುವುದು" ಎಂಬುದಾಗಿ ಆದೇಶಿಸಲಾಗಿರುತ್ತದೆ. ಪ್ರಸ್ತುತ, ಜಾರಿಯಲ್ಲಿರುವ "ಎಐಸಿಟಿಇ ಮಾರ್ಗಸೂಚಿಗಳಲ್ಲಿರುವ ವಿದ್ಯಾರ್ಹತೆಯನ್ನು ನಿಗಧಿಪಡಿಸಲಾಗಿರುತ್ತದೆ.

2025-26ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯನ್ನು ಕೆಳಕಂಡ ಮಾನದಂಡಗಳನ್ವಯ ಅಭ್ಯರ್ಥಿಗಳ ವಿಷಯವಾರು ಮೆರಿಟ್ ಲಿಸ್ಟ್ (Merit List) ಅನ್ನು ತಯಾರಿಸಿ ಪ್ರಕಟಿಸಲಾಗುವುದು.

| ಕ್ರ. ಸಂ. | ವಿದ್ಯಾರ್ಹತೆ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಅತಿಥಿ ಉಪನ್ಯಾಸಕರಿಗೆ ಗರಿಷ್ಠ ಅಂಕಗಳು | ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಅತಿಥಿ ಉಪನ್ಯಾಸಕರಿಗೆ ಗರಿಷ್ಠ ಅಂಕಗಳು |
|---|---|---|---|
| 1. | <u>ವಿದ್ಯಾರ್ಹತೆ</u>:ಅಭ್ಯರ್ಥಿಯು ಎಐಸಿಟಿಇ ನಿಯಮಗಳನ್ವಯ ಕನಿಷ್ಠ ವಿದ್ಯಾರ್ಹತೆ ಅನುಸಾರ ಪದವಿಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ 30% ನ್ನು ಗಣನೆಗೆ ತೆಗೆದುಕೊಳ್ಳುವುದು. | 30 | 30 |



File No. ED/64/TGL/2025-ED_SO_TECH-EDUCATION HIGHER SEC (Computer No. 1862379)
Generated from eOffice by PRUTHVIRAJ M.R, ED-ASST-TECH(MRP), ASSISTANT, EDUCATION HIGHER DEPARTMENT on 07/...2025 ...
CamScanner

| | | | |
|---|---|---|---|
| | *(ಉದಾ: ಅಭ್ಯರ್ಥಿಯು ಪದವಿಯಲ್ಲಿ ಶೇಕಡ 60 ಅಂಕ ಪಡೆದಿದ್ದಲ್ಲಿ ಆದರ ಶೇಕಡ 30ರಷ್ಟು ಭಾಗವನ್ನು ಅಂದರೆ 18 ಅಂಕಗಳು)* | | |
| 2. | **ಹೆಚ್ಚುವರಿ** ವಿದ್ಯಾರ್ಹತೆ: | | |
| | 1) ಎಂ.ಟೆಕ್/ಎಂ.ಇ- ಇಂಜಿನಿಯರಿಂಗ್ ವಿಷಯಕ್ಕೆ ಸಂಬಂಧಿಸಿದವರಿಗೆ<br>2) ಎಂ.ಫಿಲ್- Science & Humanities (ವಿಷಯಕ್ಕೆ ಸಂಬಂಧಿಸಿದವರಿಗೆ | - | 10 |
| | 3) ಪಿಹೆಚ್.ಡಿ ವಿದ್ಯಾರ್ಹತೆ ಪಡೆದಿದ್ದಲ್ಲಿ | 22 | 12 |
| 3. | **ಅನುಭವ**: ಹಿಂದಿನ ವರ್ಷಗಳಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಅವಧಿಗೆ ಪ್ರತಿ ಶೈಕ್ಷಣಿಕ ವರ್ಷಕ್ಕೆ 3 ಅಂಕಗಳಂತೆ ಗರಿಷ್ಠ 16 ವರ್ಷಗಳಿಗೆ 48 ಅಂಕಗಳನ್ನು ಮಿತಿಗೊಳಿಸಲಾಗುವುದು.<br>ಸೇವೆಗೆ ಅಂಕಗಳನ್ನು ನಿರ್ಧರಿಸಲು ಪ್ರತಿ ಶೈಕ್ಷಣಿಕ ವರ್ಷದ 8 ತಿಂಗಳು ಮತ್ತು ಹೆಚ್ಚಿನ ಅವಧಿಯ ಸೇವೆಯನ್ನು ಒಂದು ವರ್ಷ ಎಂದು ಪರಿಗಣಿಸಲಾಗುವುದು. | 48 | 48 |
| | ಒಟ್ಟು | **100** | **100** |

| | |
|---|---|
| **ಷರಾ** | ಅರ್ಹ ವಿಕಲಚೇತನ ಅಭ್ಯರ್ಥಿಗಳಿಗೆ ಹೆಚ್ಚುವರಿಯಾಗಿ 10 ಅಂಕಗಳನ್ನು ನೀಡಲಾಗುವುದು. |

## I. ಆಯ್ಕೆ ಪ್ರಕ್ರಿಯೆ ವೇಳಾಪಟ್ಟಿ:

| ಕ್ರ. ಸಂ. | ವಿವರ | ದಿನಾಂಕ |
|---|---|---|
| 1. | ಆನ್‌ಲೈನ್ ಮೂಲಕ ಹೊಸದಾಗಿ ಅರ್ಜಿ ಸಲ್ಲಿಸಲು / ಈಗಾಗಲೇ ಸಲ್ಲಿಸಿರುವ ಅರ್ಜಿಯನ್ನು EDIT ಮಾಡಲು ಪ್ರಾರಂಭದ ದಿನಾಂಕ: (ಪ್ರಾಂಶುಪಾಲರ ಮುಖಾಂತರ) | 21.07.2025 |
| 2. | ಅರ್ಜಿ ಸಲ್ಲಿಸಲು / EDIT ಮಾಡಲು ಕೊನೆಯ ದಿನಾಂಕ: | 24.07.2025 |
| 3. | ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟಿಸುವ ದಿನಾಂಕ: | 28.07.2025 |
| 4. | ಕಾರ್ಯಭಾರಕ್ಕೆ ಅನುಗುಣವಾಗಿ ಖಾಲಿಹುದ್ದೆ ಹಾಗೂ ಅಭ್ಯರ್ಥಿಗಳ ಅಂತಿಮ ಮೆರಿಟ್ ಪಟ್ಟಿ ಪ್ರಕಟಿಸುವ ದಿನಾಂಕ: | 30.07.2025 |
| 6. | ಮೆರಿಟ್ ಪಟ್ಟಿಯನ್ವಯ ಸಂಸ್ಥೆ ಆಯ್ಕೆ ಕೌನ್ಸಿಲಿಂಗ್ ನಡೆಸುವ ದಿನಾಂಕ | 31.07.2025 ರಿಂದ 04.08.2025 |
| 7. | ಕೌನ್ಸಿಲಿಂಗ್‌ನಲ್ಲಿ ಸಂಸ್ಥೆಯನ್ನು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸುವ ದಿನಾಂಕ: | |

**ಷರತ್ತುಗಳು:**



ile No. ED/64/TGL/2025-ED_SO_TECH-EDUCATION HIGHER SEC (Computer No. 1862379)
enerated from eOffice by PRUTHVIRAJ M R, ED-ASST-TECH(MRP), ASSISTANT, EDUCATION HIGHER DEPARTMENT on 07/[illegible]025 03:17 PM
CS CamScanner

1. ಎಐಸಿಟಿಇ ನಿಗಧಿಪಡಿಸಿದ ಮಾರ್ಗಸೂಚಿಗಳಲ್ಲಿರುವಂತೆ ವಿದ್ಯಾರ್ಹತೆ ಹೊಂದಿರುವುದು ಕಡ್ಡಾಯವಾಗಿರುತ್ತದೆ.

2. 2024-25ನೇ ಸಾಲಿಗೆ ಈಗಾಗಲೇ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ Guest Faculty ID ಅನ್ನು ಬಳಸಿಕೊಂಡು ಪ್ರಾಂಶುಪಾಲರು ಆನ್-ಲೈನ್‌ನಲ್ಲಿ ಅರ್ಜಿಗಳನ್ನು UPDATE ಮಾಡುವ ಅವಕಾಶ ಕಲ್ಪಿಸಲಾಗಿರುತ್ತದೆ.

3. ಹೊಸದಾಗಿ ಅರ್ಜಿ ಸಲ್ಲಿಸುವ ಅತಿಥಿ ಉಪನ್ಯಾಸಕ ಆಕಾಂಕ್ಷಿಗಳು ಹತ್ತಿರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ತಮ್ಮ ಅರ್ಹ ದಾಖಲುಗಳೊಂದಿಗೆ (01 set Xerox copy) ಪ್ರಾಂಶುಪಾಲರ ಮುಖಾಂತರ ಆನ್-ಲೈನ್‌ನಲ್ಲಿ ದಾಖಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

4. ಮೇಲೆ ತಿಳಿಸಿದ ಮಾನದಂಡಗಳನ್ನು ಅನುಸರಿಸಿ ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿರುವ ವಿದ್ಯಾರ್ಹತೆ ಮತ್ತು ಸೇವಾ ವಿವರಗಳ ಆಧಾರದ ಮೇಲೆ ರಾಜ್ಯವ್ಯಾಪಿ ಮೆರಿಟ್ ಪಟ್ಟಿ (State-level Merit List) ಅನ್ನು ಪ್ರಕಟಿಸಲಾಗುವುದು.

5. ವಿಷಯವಾರು ಲಭ್ಯವಿರುವ ಕಾರ್ಯಭಾರಕ್ಕನುಗುಣವಾಗಿ ಅಗತ್ಯವಿರುವ ಸಂಖ್ಯೆಯ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆಪಟ್ಟಿ (Provisional Selection List) ಅನ್ನು ಪ್ರಕಟಿಸಲಾಗುವುದು ಹಾಗೂ ಆಯ್ಕೆಪಟ್ಟಿಯಲ್ಲಿನ ಅಭ್ಯರ್ಥಿಗಳಿಗೆ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಸಂಸ್ಥೆಯನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು.

6. ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಲ್ಲಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013 ರ ಕಂಡಿಕೆ (3) ಮತ್ತು (13) ರಂತೆ ಅನ್ವಯವಾಗುವ ಮೀಸಲಾತಿ ನಿಗಧಿಪಡಿಸಿ, ಮೀಸಲಾತಿಗೊಳಪಡುವ ಹುದ್ದೆಗಳನ್ನು ಸ್ಥಳೀಯ ವ್ಯಕ್ತಿಗಳಿಂದಲೇ ಭರ್ತಿ ಮಾಡಿಕೊಳ್ಳುವಂತೆ ಸೂಚಿಸಲಾಗಿದ್ದು, ಅದರಂತೆ ಕ್ರಮವಹಿಸಲಾಗುವುದು.

7. ಆಯ್ಕೆಯಾಗುವ ಅತಿಥಿ ಉಪನ್ಯಾಸಕರಿಗೆ ಸರ್ಕಾರದ ಆದೇಶ ಸರ್ಕಾರದ ಪತ್ರ ಸಂಖ್ಯೆ: ಇಡಿ 122 ಡಿಟಿಇ 2023, ದಿನಾಂಕ:12.08.2024 ಮತ್ತು ದಿ:27.09.2024 ರನ್ವಯ ಅತಿಥಿ ಉಪನ್ಯಾಸಕರಾಗಿ ನಿರ್ವಹಿಸುವ ಕಾರ್ಯಭಾರಕ್ಕೆ ಹಾಗೂ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಹೊಂದಿದ್ದ ಅರ್ಹತೆಗೆ (ವಿದ್ಯಾರ್ಹತೆ/ಸೇವಾ ಅವಧಿ) ಅನುಗುಣವಾಗಿ ಗೌರವಧನವನ್ನು ಪಾವತಿಸಲಾಗುವುದು.

8. ನಿಗಧಿಪಡಿಸಿರುವ ವಾರಕ್ಕೆ 15/17/14 ಗಂಟೆಗಳಿಗಿಂತ ಕಡಿಮೆ ಕಾರ್ಯಭಾರವಿದ್ದಲ್ಲಿ ಎಷ್ಟು ಗಂಟೆಗಳ ಕಾರ್ಯಭಾರ ಲಭ್ಯವಿದೆಯೋ ಅಷ್ಟಕ್ಕೆ ಅನುಗುಣವಾಗಿ ಗೌರವಧನವನ್ನು ನೀಡಲಾಗುವುದು.

9. ಅಭ್ಯರ್ಥಿಗಳು ಅತಿಥಿ ಉಪನ್ಯಾಸಕರಾಗಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಈ ಹಿಂದೆ ಸಲ್ಲಿಸಿರುವ ಸೇವೆಯ ಸೇವಾನುಭವ ವಿವರಗಳನ್ನು ಪ್ರಾಂಶುಪಾಲರಿಂದ ನಿಗಧಿತ ನಮೂನೆಯಲ್ಲಿ ಪಡೆದು, ಸದರಿ ಸೇವಾ ವಿವರಗಳನ್ನು ಆನ್‌ಲೈನ್ ಅರ್ಜಿಯಲ್ಲಿ ಯಥಾವತ್ತಾಗಿ ನಮೂದಿಸುವುದು. (ಸೇವಾ ಪ್ರಮಾಣ ಪತ್ರದ ನಮೂನೆಯನ್ನು ಇದರೊಂದಿಗೆ ಲಗತ್ತಿಸಿದೆ)

10. ಅತಿಥಿ ಉಪನ್ಯಾಸಕ ಸೇವೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು 01 ವಿಷಯಕ್ಕೆ ಒಂದೇ ಅರ್ಜಿಯನ್ನು ಮಾತ್ರ ಸಲ್ಲಿಸುವುದು. ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ. ಒಂದಕ್ಕಿಂತ ಹೆಚ್ಚಿನ ಅರ್ಜಿಗಳನ್ನು ಸಲ್ಲಿಸಿದಲ್ಲಿ ಅಂತಹ ಅಭ್ಯರ್ಥಿಗಳ ಒಂದು ಅರ್ಜಿಯನ್ನು ಮಾತ್ರ ಆಯ್ಕೆಗೆ ಪರಿಗಣಿಸಲಾಗುವುದು.

11. ಕರ್ನಾಟಕ ರಾಜ್ಯದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಅರೆಕಾಲಿಕ/ ಅತಿಥಿ ಉಪನ್ಯಾಸಕರಾಗಿ ಸಲ್ಲಿಸಿದ



File No. ED/64/TGL/2025-ED_SO_TECH-EDUCATION HIGHER SEC (Computer No. 1862379)
CamScanner
Generated from eOffice by PRUTHVIRAJ M R, ED-ASST-TECH(MRP), ASSISTANT, EDUCATION HIGHER DEPARTMENT on 07/

ಸೇವೆಯನ್ನು ಮಾತ್ರ ಆಯ್ಕೆಗೆ ಪರಿಗಣಿಸಲಾಗುವುದು ಹಾಗೂ ಇತರೆ ಕಾಲೇಜು ಮತ್ತು ವಿಶ್ವವಿದ್ಯಾಲಯಗಳಲ್ಲಿ ಸಲ್ಲಿಸಿದ ಸೇವೆಯನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.

12. ಮೆರಿಟ್ ಪಟ್ಟಿ ಪ್ರಕಾರ ಕೌನ್ಸಿಲಿಂಗ್ ನಡೆಸಿ ಕಾಲೇಜುಗಳಿಗೆ ಹಂಚಿಕೆಯಾಗುವ ಅಭ್ಯರ್ಥಿಗಳು ಹಂಚಿಕೆ ಪಟ್ಟಿ (Allotment List) ಪ್ರಕಟಣೆಯಾದ ನಂತರ 03 ಕೆಲಸದ ದಿನಗಳೊಳಾಗಿ ಸಂಬಂಧಪಟ್ಟ ಕಾಲೇಜಿನಲ್ಲಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಬೇಕಾಗಿರುತ್ತದೆ. ಕರ್ತವ್ಯಕ್ಕೆ ವರದಿ ಮಾಡಿಕೊಂಡು ನಿಗಧಿಪಡಿಸಿರುವ ಪೂರ್ಣ ಕಾರ್ಯಭಾರವಿರುವ ಅತಿಥಿ ಉಪನ್ಯಾಸಕರು ಇತರ ಕಾಲೇಜು/ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸಲು ಅವಕಾಶವಿರುವುದಿಲ್ಲ.

13. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ನೀಡಿರುವ ವಿವರಗಳಂತೆ, ಅಗತ್ಯ ದಾಖಲೆಗಳನ್ನು ಕಾಲೇಜಿನಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವ ಸಮಯದಲ್ಲಿ ಪ್ರಾಂಶುಪಾಲರ ಸಮಕ್ಷಮ ಹಾಜರುಪಡಿಸುವುದು ಕಡ್ಡಾಯವಾಗಿರುತ್ತದೆ. ಮುಂದುವರೆದು, ಕರ್ತವ್ಯಕ್ಕೆ ವರದಿ ಮಾಡಿಕೊಂಡ ಅತಿಥಿ ಉಪನ್ಯಾಸಕರು ಪ್ರಾಂಶುಪಾಲರ ಸಮಕ್ಷಮ ಹಾಜರುಪಡಿಸುವ ವಿದ್ಯಾರ್ಹತೆ / ಕಲ್ಯಾಣ ಕರ್ನಾಟಕ ಸ್ಥಳೀಯ ಅಭ್ಯರ್ಥಿಯ ಪ್ರಮಾಣ ಪತ್ರ / ಸೇವಾ ಪ್ರಮಾಣ ಪತ್ರ ಮತ್ತಿತರೆ ದಾಖಲೆಗಳನ್ನು ಪ್ರಾಂಶುಪಾಲರಿಗೆ ಸಲ್ಲಿಸುವುದು.

14. ಪ್ರಾಂಶುಪಾಲರುಗಳು ಆನ್‌ಲೈನ್‌ನಲ್ಲಿ ವಿದ್ಯಾರ್ಹತೆ, ಸೇವಾ ವಿವರಗಳು ಹಾಗೂ ಇನ್ನಿತರೆ ಅಗತ್ಯ ಮಾಹಿತಿಗಳನ್ನು ನಮೂದಿಸುವಾಗ ತಪ್ಪಾಗದಂತೆ ಗಮನಹರಿಸಿ ಸರಿಯಾದ/ ನಿಖರ ಮಾಹಿತಿಯನ್ನು ದಾಖಲಿಸುವುದು.

15. ಆದಾಗ್ಯೂ, ಕಣ್ ತಪ್ಪಿನಿಂದಾಗಿ ತಪ್ಪಾದ ಮಾಹಿತಿಯನ್ನು ನಮೂದಿಸಿರುವುದು ಕಂಡುಬಂದಲ್ಲಿ ಕೂಡಲೇ ಗಮನಹರಿಸಿ, ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗಾಗಿ ಸಲ್ಲಿಸಿರುವ ಅರ್ಜಿಯನ್ನು EDIT ಮಾಡುವ ಮೂಲಕ ಸರಿಪಡಿಸಿಕೊಳ್ಳಲು ಅವಕಾಶವಿರುತ್ತದೆ. ಒಂದು ವೇಳೆ ಕೊನೆಯ ದಿನಾಂಕದ ನಂತರ ಮಾಹಿತಿಯನ್ನು ಸರಿಪಡಿಸಿಕೊಳ್ಳಲು ಮನವಿ/ ಕೋರಿಕೆ ಸಲ್ಲಿಸಿದಲ್ಲಿ ಅಂತಹ ಯಾವುದೇ ಕೋರಿಕೆ/ ಮನವಿಗಳನ್ನು ಪರಿಗಣಿಸುವುದಿಲ್ಲ ಎಂಬುದನ್ನು ಕಟ್ಟುನಿಟ್ಟಾಗಿ ಸೂಚಿಸಲಾಗಿದೆ.

16. ಅಭ್ಯರ್ಥಿಗಳು ಅತಿಥಿ ಉಪನ್ಯಾಸಕರ ಸೇವೆಗಾಗಿ ಆನ್‌ಲೈನ್ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರುವ ಶೈಕ್ಷಣಿಕ ಅರ್ಹತೆ ಹಾಗೂ ಸೇವಾ ವಿವರಗಳನ್ನು ಮಾತ್ರ 2025-26 ನೇ ಸಾಲಿಗೆ ಪರಿಗಣಿಸಲಾಗುವುದು. ಅರ್ಜಿ ಸಲ್ಲಿಸಿದ ಕೊನೆಯ ದಿನಾಂಕದ ನಂತರ ಅಥವಾ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಪಡೆಯಬಹುದಾದ ಯಾವುದೇ ಶೈಕ್ಷಣಿಕ ಅರ್ಹತೆ ಹಾಗೂ ಸೇವಾ ವಿವರಗಳ ದಾಖಲೆಗಳನ್ನು ಆಯ್ಕೆ ಪ್ರಕ್ರಿಯೆಗೆ, ಗೌರವಧನ ಪರಿಷ್ಕರಣೆಗೆ ಹಾಗೂ ಮೆರಿಟ್ ಪಟ್ಟಿಗೆ ಪರಿಗಣಿಸುವುದಿಲ್ಲ.

17. ಕೌನ್ಸಿಲಿಂಗ್ ಮೂಲಕ ಆಯ್ಕೆಗೊಂಡ ಅಭ್ಯರ್ಥಿಗಳು ಆಯಾ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದಿದ್ದಲ್ಲಿ ಅವರ ಬದಲಿಗೆ ಮೆರಿಟ್ ಪಟ್ಟಿಯಲ್ಲಿನ ನಂತರದ ಅಭ್ಯರ್ಥಿಯನ್ನು ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಲಾಗುವುದು.

18. ವಿವಿಧ ಕಾರಣಗಳಿಂದ ನಿಗಧಿತ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸದ ಅಥವಾ ಭಾಗವಹಿಸಿ ಸಂಸ್ಥೆಯನ್ನು ಆಯ್ಕೆ ಮಾಡಿಕೊಳ್ಳದ ಹಾಗೂ ಕೌನ್ಸಿಲಿಂಗ್‌ನಲ್ಲಿ ಕಾಲೇಜು ಆಯ್ಕೆ ಮಾಡಿಕೊಂಡು ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾಗದ ಅಭ್ಯರ್ಥಿಗಳಿಗೆ ಪುನಃ ಎರಡನೇ ಬಾರಿಗೆ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಲು ಅವಕಾಶ ನೀಡಲಾಗುವುದಿಲ್ಲ.

19. ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಕಾಲೇಜು ಆಯ್ಕೆಮಾಡಿಕೊಂಡು ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ಅತಿಥಿ ಉಪನ್ಯಾಸಕರುಗಳಿಗೆ ಗರಿಷ್ಠ 6 ತಿಂಗಳ ಕಾಲಾವಧಿಗೆ **ಗೌರವಧನ ರಹಿತ** Maternity Leave ಪಡೆಯಲು ಅವಕಾಶ ನೀಡಲಾಗಿದ್ದು, ಸಾಮಾನ್ಯ ಮುಕ್ತಾಯ ದಿನಾಂಕದವರೆಗೆ ಸೀಮಿತಗೊಳಿಸಿ ಸದರಿ ಅವಧಿಯನ್ನು ಸೇವಾ ಅವಧಿ ಎಂದು



le No. ED/64/TGL/2025-ED_SO_TECH-EDUCATION HIGHER SEC (Computer No. 1862379)
enerated from eOffice by PRUTHVIRAJ M R, ED-ASST-TECH(MRP), ASSISTANT, EDUCATION HIGHER DEPARTMENT on 07/...2025 03:17 PM
CS CamScanner

ಪರಿಗಣಿಸಲಾಗುವುದು. Maternity Leave ಪಡೆದ ಅತಿಥಿ ಉಪನ್ಯಾಸಕರ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಬದಲಿ ಅತಿಥಿ ಉಪನ್ಯಾಸಕರನ್ನು ತಾತ್ಕಾಲಿಕವಾಗಿ ಆಯ್ಕೆಮಾಡಿಕೊಳ್ಳಲಾಗುವುದು. ಬದಲಿ ಅತಿಥಿ ಉಪನ್ಯಾಸಕರನ್ನು Maternity Leave ಪಡೆದಿರುವ ಅತಿಥಿ ಉಪನ್ಯಾಸಕರು ವರದಿ ಮಾಡಿಕೊಂಡ ನಂತರ ಬಿಡುಗಡೆ ಮಾಡಲಾಗುವುದು.

20. ವರ್ಗಾವಣೆ/ ನಿಯೋಜನೆ/ ಮರು-ಹಂಚಿಕೆ (Redeployment) ಹಾಗೂ ಇನ್ನಿತರ ಕಾರಣದಿಂದಾಗಿ ಖಾಯಂ ಉಪನ್ಯಾಸಕರು ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾದಾಗ ಅಥವಾ ಸೆಮಿಸ್ಟರ್ ಅವಧಿಯಲ್ಲಿ ಕಾರ್ಯಭಾರ ಕಡಿಮೆಯಾದಾಗ ಅಥವಾ ಇತರೆ ಕಾರಣಗಳಿಂದ ಹೆಚ್ಚುವರಿ ಕಾರ್ಯಭಾರದಲ್ಲಿ ವ್ಯತ್ಯಯವಾದಾಗ ಆ ಕಾಲೇಜಿಗೆ ಸಂಬಂಧಪಟ್ಟ ವಿಷಯದಲ್ಲಿ ಕೊನೆಯದಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ಬಿಡುಗಡೆಗೊಳಿಸಲಾಗುವುದು.

21. ಅತಿಥಿ ಉಪನ್ಯಾಸಕರನ್ನು ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ತಾತ್ಕಾಲಿಕ ವ್ಯವಸ್ಥೆಯಡಿ ಆಯ್ಕೆ ಮಾಡಿಕೊಳ್ಳುವುದರಿಂದ ಸದರಿ ತಾತ್ಕಾಲಿಕ ಸೇವೆಯನ್ನು ಪರಿಗಣಿಸಿ ಖಾಯಂ ಮಾಡಲು ಮತ್ತು ನೇರ ನೇಮಕಾತಿಯಲ್ಲಿ ಆದ್ಯತೆ ನೀಡಲು ಅವಕಾಶ ಇರುವುದಿಲ್ಲ ಹಾಗೂ ಈ ಬಗ್ಗೆ ಕೃಪಾಂಕ ಕೋರಲು ಸಹ ಯಾವುದೇ ಹಕ್ಕು ಇರುವುದಿಲ್ಲ.

22. ಆನ್‌ಲೈನ್ ಮೂಲಕ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುತ್ತಿರುವ ಕುರಿತು ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರು ತಮ್ಮ ಕಾಲೇಜುಗಳ ನೋಟೀಸ್ ಬೋರ್ಡ್‌ನಲ್ಲಿ ಪ್ರಕಟಿಸುವುದರೊಂದಿಗೆ, ಅಭ್ಯರ್ಥಿಗಳಿಗೆ ಹೊಸದಾಗಿ /ಈಗಾಗಲೆ ಅರ್ಜಿ ಸಲ್ಲಿಸಿರುವ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು/ EDIT ಮಾಡಲು ಮಾಹಿತಿಯನ್ನು ನೀಡುವುದು.

23. ಅತಿಥಿ ಉಪನ್ಯಾಸಕರ ಆಯ್ಕೆಗೆ ಸಂಬಂಧಿಸಿದ ಎಲ್ಲಾ ಮಾಹಿತಿಗಳನ್ನು ಇಲಾಖೆಯ ಅಂತರ್ಜಾಲ ತಾಣ https://dtek.karnataka.gov.in ರಲ್ಲಿ ಪ್ರಕಟಿಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಸದರಿ ಅಂತರ್ಜಾಲ ತಾಣವನ್ನು ಪ್ರತಿನಿತ್ಯ ಗಮನಿಸಲು ತಿಳಿಸಲಾಗಿದೆ.

24. ನೇಮಕಗೊಂಡ ಅತಿಥಿ ಉಪನ್ಯಾಸಕರು ಪಠ್ಯಕ್ರಮದಂತೆ ಸಂಸ್ಥೆಗೆ ಹಾಜರಾಗಿ ಸದರಿ ದಿನಗಳಂದು ಕರ್ತವ್ಯ ನಿರ್ವಹಿಸುವುದು ಹಾಗೂ ಪ್ರಾಂಶುಪಾಲರು ತಿಳಿಸಿದ ದಿನಾಂಕಗಳಂದು ಸಂಸ್ಥೆಗೆ ಹಾಜರಾಗಿ ಶೈಕ್ಷಣಿಕ ಹಾಗೂ ಇತರ ಕಾರ್ಯಗಳಲ್ಲಿ ಕಡ್ಡಾಯವಾಗಿ ತೊಡಗಿಸಿಕೊಳ್ಳುವುದು. Adhar Enabled Biometric Attendance System [AEBAS] ಹಾಜರಾತಿ ಕಡ್ಡಾಯವಾಗಿರುತ್ತದೆ.

25. ಸರ್ಕಾರದ ಆದೇಶ ಸಂ:ಇಡಿ/52/ಡಿಟಿಇ/2024 ದಿ:14.03.2024 ರನ್ವಯ ಗರಿಷ್ಟ ಮಾಸಿಕ ಕಾರ್ಯಭಾರವನ್ನು ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಮಾತ್ರ ತಿಂಗಳಿಗೆ 01 ದಿನ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಿ ಆದೇಶಿಸಲಾಗಿದೆ ಹಾಗೂ 01 ದಿನ ಸಾಂದರ್ಭಿಕ ರಜೆಯನ್ನು ಪಡೆಯದಿದ್ದಲ್ಲಿ ಮುಂದಿನ ತಿಂಗಳಿಗೆ ಮುಂದುವರಿಸಲು ಅವಕಾಶವಿರುವುದಿಲ್ಲ.

26. ಈ ಪ್ರಕಟಣೆಯಲ್ಲಿ ಮೇಲಿನಂತೆ ತಿಳಿಸಿರುವ ಅಂಶಗಳನ್ನು ಹೊರತುಪಡಿಸಿ ಇತರೆ ಎಲ್ಲಾ ವಿಷಯಗಳಿಗೆ ಈ ಹಿಂದೆ ಹೊರಡಿಸಲಾಗಿರುವ ಸುತ್ತೋಲೆ/ ಸರ್ಕಾರದ ಆದೇಶಗಳಲ್ಲಿನ ಅಂಶಗಳು ಅನ್ವಯವಾಗುತ್ತವೆ.

27. ಕಲ್ಯಾಣ-ಕರ್ನಾಟಕ ಮೀಸಲಾತಿ ಕೋರಿಕೆ ಸಲ್ಲಿಸಿ, ಅದರನ್ವಯ ಆಯ್ಕೆಗೊಂಡು, ಸಂಬಂಧಪಟ್ಟ ಸಂಸ್ಥೆಯಲ್ಲಿ ಕರ್ತವ್ಯಕ್ಕೆ ಹಾಜರಾಗುವ ಸಂದರ್ಭದಲ್ಲಿ ಕಲ್ಯಾಣ-ಕರ್ನಾಟಕ ಮೀಸಲಾತಿ ಪ್ರಮಾಣ ಪತ್ರವನ್ನು ಪ್ರಾಂಶುಪಾಲರ ಸಮಕ್ಷಮ ಹಾಜರುಪಡಿಸಲು ವಿಫಲರಾದಲ್ಲಿ, ಅಥವಾ ಹಾಜರುಪಡಿಸಿದ ಪ್ರಮಾಣ ಪತ್ರವು ತಿರಸ್ಕೃತಗೊಂಡಲ್ಲಿ ಅಂತಹ ಅಭ್ಯರ್ಥಿಗಳನ್ನು ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗುವುದು.



File No. ED/64/TGL/2025-ED_SO_TECH-EDUCATION HIGHER SEC (Computer No. 1862379)

CamScanner

Generated from eOffice by PRUTHVIRAJ M R, ED-ASST-TECH(MRP), ASSISTANT, EDUCATION HIGHER DEPARTMENT on 07/

28. ಆಯ್ಕೆಯಾದ ಅತಿಥಿ ಉಪನ್ಯಾಸಕರು ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿದ್ದಲ್ಲಿ, ಅಂತಹ ತಪ್ಪು ಮಾಹಿತಿ/ನ್ಯೂನ್ಯತೆಗಳಿಗೆ ಸಂಬಂಧಪಟ್ಟ ಅತಿಥಿ ಉಪನ್ಯಾಸಕರೇ ಜವಾಬ್ದಾರರಾಗಿರುತ್ತಾರೆ. ಆಯ್ಕೆಯಾದ ಅತಿಥಿ ಉಪನ್ಯಾಸಕರು ಸಂಸ್ಥೆಯಲ್ಲಿ ಹಾಜರುಪಡಿಸುವ ವಿದ್ಯಾರ್ಹತೆಯ ಅಂಕಪಟ್ಟಿಗಳು, ವಿಕಲ ಚೇತನ ಪ್ರಮಾಣ ಪತ್ರ, ಕಲ್ಯಾಣ-ಕರ್ನಾಟಕ ಮೀಸಲಾತಿ ಪ್ರಮಾಣ ಪತ್ರ, ಸೇವಾವಧಿಯ ಪ್ರಮಾಣ ಪತ್ರಗಳು ಹಾಗೂ ಇತರೆ ಅಗತ್ಯ ದಾಖಲೆಗಳು ತಪ್ಪು/ನ್ಯೂನ್ಯತೆ ಅಥವಾ ನಕಲಿ ಎಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯ್ಕೆ ಪ್ರಕ್ರಿಯೆಯಿಂದ ಕೈಬಿಟ್ಟು ಅವರುಗಳ ವಿರುದ್ಧ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದು.

17/7.

**ಆಯುಕ್ತರು**
ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ

**ಇವರಿಗೆ,**

1) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆಯ, ಬೆಂಗಳೂರು.
2) ಜಂಟಿ ನಿರ್ದೇಶಕರು, ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆಯ, ಬೆಂಗಳೂರು.
3) ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರುಗಳಿಗೆ.
4) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ತಾ.ಶಿ.ಇ ಕಛೇರಿ, ಬೆಂ. – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.

**ಪ್ರತಿಯನ್ನು,**

1) ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂ. - ಮಾನ್ಯ ಸಚಿವರ ಅವಗಾಹನೆಗೆ ತರಲು ಕೋರಿದೆ.
2) ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ಕಛೇರಿ ಪ್ರತಿ.



ile No. ED/64/TGL/2025-ED_SO_TECH-EDUCATION HIGHER SEC (Computer No. 1862379)
enerated from eOffice by PRUTHVIRAJ M P, ED-ASST-TECH(MPP), ASSISTANT EDUCATION HIGHER DEPARTMENT on 07/...
CS CamScanner

# ನಮೂನೆ

## ಸೇವಾ ಪ್ರಮಾಣ ಪತ್ರ

ಸಂಸ್ಥೆಯ ಹೆಸರು:______________________________

ಅತಿಥಿ ಉಪನ್ಯಾಸಕರ ಹೆಸರು:______________________

| Sl.No. | Academic Year | ODD Semester | EVEN Semester | Remarks |
|---|---|---|---|---|
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |

ಪ್ರಾಂಶುಪಾಲರ ಸಹಿ,
(ಮೊಹರಿನೊಂದಿಗೆ)



File No. ED/64/TGL/2025-ED_SO_TECH-EDUCATION HIGHER SEC (Computer No. 1862379)
Generated from eOffice by PRUTHVIRAJ M R, ED-ASST-TECH(MRP), ASSISTANT, EDUCATION HIGHER DEPARTMENT on 07/
CS CamScanner

6ಸಂಖ್ಯೆ-4.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರ್ಕಾರಿ ಇಂಜಿನಿಯರಿಂಗ್‌ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಗೌರವ ಧನ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಪತ್ರ ಸಂಖ್ಯೆ:ಇಡಿ 174 ಡಿಟಿಇ 2020, ದಿನಾಂಕ:22.12.2020.
2. ಸರ್ಕಾರದ ಆದೇಶ ಸಂಖ್ಯೆ:ಇಡಿ 52 ಡಿಟಿಇ 2024, ದಿನಾಂಕ:04.03.2024.
3. ಸರ್ಕಾರದ ಆದೇಶ ಸಂಖ್ಯೆ:ಇಡಿ 122 ಡಿಟಿಇ 2023,ದಿನಾಂಕ:12.08.2024.
4. ಆಯುಕ್ತಾಲಯದ ಏಕಕಡತ ಸಂಖ್ಯೆ:DTE-PLAN0DVP1/76/2023 (E-1195040).

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ಸರ್ಕಾರಿ ಇಂಜಿನಿಯರಿಂಗ್‌ಕಾಲೇಜುಗಳಲ್ಲಿನ ಅರೆಕಾಲಿಕ ಉಪನ್ಯಾಸಕರುಗಳಿಗೆ ಗರಿಷ್ಠ ಮಾಸಿಕ ಕಾರ್ಯಭಾರ 32 ಗಂಟೆಗೆ, ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಭತ್ಯೆ ರೂ.15000/- ಗಳನ್ನು ಹಾಗೂ ಸರ್ಕಾರಿ ಪಾಲಿಟೆಕ್ನಿಕ್‌ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿನ ಅರೆಕಾಲಿಕ ಉಪನ್ಯಾಸಕರುಗಳಿಗೆ ಗರಿಷ್ಠ ಮಾಸಿಕ ಕಾರ್ಯಭಾರ 36 ಗಂಟೆಗೆ ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಭತ್ಯೆ ರೂ.12500/-ಗಳನ್ನು ನಿಗದಿಪಡಿಸಲಾಗಿತ್ತು. ವಿವರ ಕೆಳಕಂಡಂತಿವೆ.

| ಕ್ರ. ಸಂ. | ಸಂಸ್ಥೆ | ಕನಿಷ್ಠ ಮಾಸಿಕ ಕಾರ್ಯಭಾರ | ಗರಿಷ್ಠ ಮಾಸಿಕ ಕಾರ್ಯಭಾರ | ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಭತ್ಯೆ |
|---|---|---|---|---|
| 1 | ಇಂಜಿನಿಯರಿಂಗ್‌ಕಾಲೇಜು | 16 ಗಂಟೆ | 32 ಗಂಟೆ | ರೂ.15,000/- |
| 2 | ಪಾಲಿಟೆಕ್ನಿಕ್‌ಹಾಗೂ ಕಿರಿಯ ತಾಂತ್ರಿಕ ಶಾಲೆಗಳು | 20 ಗಂಟೆ | 36 ಗಂಟೆ | ರೂ.12,500/- |

ನಂತರ, ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ ಪಾಲಿಟೆಕ್ನಿಕ್ ಕಾಲೇಜುಗಳು/ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಪಾವತಿಸಲಾಗುತ್ತಿದ್ದ, ಗೌರವಧನವನ್ನು ಸದರಿ ಅರೆಕಾಲಿಕ ಉಪನ್ಯಾಸಕರು ಸಲ್ಲಿಸಿರುವ ಸೇವಾವಧಿಗೆ ಅನುಗುಣವಾಗಿ ಈ ಕೆಳಕಂಡಂತೆ ಹೆಚ್ಚಿಸಿ ಆದೇಶಿಸಲಾಗಿತ್ತು.

| ಕ್ರ. ಸಂ. | ಸೇವಾವಧಿ | ಹೆಚ್ಚಿಸಲಾದ ಗೌರವಧನ (ರೂ.ಗಳಲ್ಲಿ) |
|---|---|---|
| 1. | 5 ವರ್ಷಕ್ಕಿಂತ ಕಡಿಮೆ ಸೇವಾವಧಿ | 5,000/- |
| 2. | 5 ವರ್ಷದಿಂದ 10 ವರ್ಷಗಳ ಸೇವಾವಧಿ | 6,000/- |
| 3. | 10 ವರ್ಷದಿಂದ 15 ವರ್ಷಗಳ ಸೇವಾವಧಿ | 7,000/- |
| 4. | 15 ವರ್ಷ ಮೇಲ್ಪಟ್ಟು ಸೇವಾವಧಿ | 8,000/- |



File No. ED/64/TGL/2025-ED_SO_TECH-EDUCATION HIGHER SEC (Computer No. 1862379)
Scanned with OKEN Scanner
Generated from eOffice by PRUTHVIRAJ M R, ED-ASST-TECH(MRP), ASSISTANT, EDUCATION HIGHER DEPARTMENT

ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಆದೇಶದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್‌ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಕ್ರಮವಾಗಿ ಹಾಲಿ ವಾರಕ್ಕೆ ಗರಿಷ್ಠ 8/9/9 ಘಂಟೆಗಳ ಕಾರ್ಯಭಾರಕ್ಕೆ ಬದಲಾಗಿ, ವಾರಕ್ಕೆ ಗರಿಷ್ಠ 15/17/14 ಘಂಟೆಗಳ ಕಾರ್ಯಭಾರವನ್ನು ನಿಗದಿಪಡಿಸಿ ಅವರುಗಳ ಮಾಸಿಕ ಗೌರವಧನವನ್ನು ಭವಿಷ್ಯವರ್ತಿಯಾಗಿ ಆದೇಶ ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ಕೆಲವು ಷರತ್ತುಗಳಿಗೊಳಪಟ್ಟು ಈ ಕೆಳಕಂಡಂತೆ ನಿಗದಿಪಡಿಸಿ ಆದೇಶಿಸಲಾಗಿತ್ತು.

| ಕ್ರ. ಸಂ. | ವಿದ್ಯಾರ್ಹತೆ | ಸರ್ಕಾರಿ ಇಂಜಿನಿಯರಿಂಗ್‌ಕಾಲೇಜುಗಳ ಅರೆಕಾಲಿಕ ಉಪನ್ಯಾಸಕರಿಗೆ | ಸರ್ಕಾರಿ ಪಾಲಿಟೆಕ್ನಿಕ್‌ಗಳ ಅರೆಕಾಲಿಕ ಉಪನ್ಯಾಸಕರಿಗೆ | ಕಿರಿಯ ತಾಂತ್ರಿಕ ಶಾಲೆಗಳ ಅರೆಕಾಲಿಕ ಉಪನ್ಯಾಸಕರಿಗೆ |
|---|---|---|---|---|
| 1. | 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | ರೂ. 32000/- | ರೂ.28,000/- | - |
| 2. | 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | ರೂ. 30000/- | ರೂ.26,000/- | - |
| 3. | 5 ವರ್ಷಕ್ಕಿಂತ ಹೆಚ್ಚಿನ ಅವಧಿಗೆ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗದಿಪಡಿಸಿದ ವಿದ್ಯಾರ್ಹತೆಗಿಂತ ಕಡಿಮೆ ವಿದ್ಯಾರ್ಹತೆ ಹೊಂದಿರುವವರಿಗೆ | ರೂ. 28,000/- | ರೂ.24,000/- | - |
| 4. | 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗದಿಪಡಿಸಿದ ವಿದ್ಯಾರ್ಹತೆಕ್ಕಿಂತ ಕಡಿಮೆ ವಿದ್ಯಾರ್ಹತೆ ಹೊಂದಿರುವವರಿಗೆ | ರೂ. 26,000/- | ರೂ.22,000/- | - |
| 5. | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿನ ಅರೆಕಾಲಿಕ ಉಪನ್ಯಾಸಕರುಗಳಿಗೆ | - | - | ರೂ.18000/- |



Scanned with OKEN Scanner

ಮೇಲೆ ಓದಲಾದ ಕ್ರಮ ಸಂಖ್ಯೆ(4)ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಅಡಿಯಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್‌ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಮಾಸಿಕ ಗೌರವಧನವನ್ನು ಕ್ರಮವಾಗಿ ಹಾಲಿ ವಾರಕ್ಕೆ ಗರಿಷ್ಠ 15/17/14 ಗಂಟೆಗಳನ್ನು ನಿಗದಿಪಡಿಸಿ ಪರಿಷ್ಕರಿಸಿ ಹೊರಡಿಸಲಾದ ದಿನಾಂಕ:12.08.2024ರ ಆದೇಶಕ್ಕೆ ಈ ಮುಂದಿನಂತೆ ಷರತ್ತು/ಅಂಶಗಳನ್ನುಸೇರ್ಪಡೆ ಮಾಡಿ ಆದೇಶ ಹೊರಡಿಸುವಂತೆ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರು ಕೋರಿರುತ್ತಾರೆ.

1. ಸರ್ಕಾರದ ಆದೇಶ ಸಂಖ್ಯೆ:ಇಡಿ 52 ಡಿಟಿಇ 2024, ದಿನಾಂಕ:04.03.2024ರಲ್ಲಿ ಹೆಚ್ಚುವರಿಯಾಗಿ ನಿಗದಿಪಡಿಸಲಾದ ಗೌರವಧನ ರೂ.5000, ರೂ.6000, ರೂ.7000 ಮತ್ತು ರೂ.8000 ಗಳನ್ನು ಸರ್ಕಾರದ ಆದೇಶ ಸಂಖ್ಯೆ:ಇಡಿ 122 ಡಿಟಿಇ 2023, ದಿನಾಂಕ:12.08.2024ರಲ್ಲಿ ನಿಗದಿಪಡಿಸಿರುವ ಗೌರವಧನಕ್ಕೆ ಅನುಗುಣವಾಗಿ ಸೇರ್ಪಡೆಗೊಳಿಸುವುದು. ಸದರಿ ಆದೇಶದಲ್ಲಿ "ಅರೆಕಾಲಿಕ ಉಪನ್ಯಾಸಕ" ಎಂದು ನಮೂದಾಗಿರುವುದನ್ನು "ಅತಿಥಿ ಉಪನ್ಯಾಸಕ" ಎಂದು ತಿದ್ದುಪಡಿ ಮಾಡುವುದು.
2. ಸೆಮಿಸ್ಟರ್ ಬದಲಾಗಿ ಶೈಕ್ಷಣಿಕ ವರ್ಷದಲ್ಲಿ 10 ತಿಂಗಳಿಗೆ ನೇಮಕ ಮಾಡುವುದು.
3. ಎ.ಐ.ಸಿ.ಟಿ.ಇ ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರಿಗೆ ನಿಗದಿತ ವಿದ್ಯಾರ್ಹತೆಯನ್ನು ಹೊಂದಲು 4 ವರ್ಷಗಳ ಕಾಲಾವಧಿ ನೀಡುವುದು. 4 ವರ್ಷಗಳ ನಂತರ ಎ.ಐ.ಸಿ.ಟಿ.ಇ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರ ನೇಮಕಾತಿಯನ್ನು ಸಂಪೂರ್ಣವಾಗಿ ನಿರ್ಬಂಧಿಸುವುದು.
4. ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುವ ಅತಿಥಿ ಉಪನ್ಯಾಸಕರಿಗೆ ಕ್ರಮವಾಗಿ ವಾರಕ್ಕೆ ಗರಿಷ್ಠ 15/17/14 ಗಂಟೆಗಳ ಕಾರ್ಯಭಾರ ಲಭ್ಯವಿಲ್ಲದಿದ್ದರೆ, ಅಂತಹ ಅತಿಥಿ ಉಪನ್ಯಾಸಕರಿಗೆ ಕಾರ್ಯಭಾರವಿರುವ ಇತರೆ ಸರ್ಕಾರಿ ಇಂಜಿನಿಯರಿಂಗ್‌ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಅಥವಾ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸಲು ಸೂಚಿಸುವುದು. ಪ್ರತಿ ವಾರಕ್ಕೆ 15/17/14 ಗಂಟೆಗಳಿಗಿಂತ ಕಡಿಮೆ ಕಾರ್ಯಭಾರವಿದ್ದರೆ, ಲಭ್ಯವಿರುವ ಕಾರ್ಯಭಾರದ ಪ್ರಮಾಣಕ್ಕೆ ಅನುಗುಣವಾಗಿ ಗೌರವಧನ ನೀಡುವುದು.

ಆಯುಕ್ತರ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ತಾಂತ್ರಿಕ ಶಿಕ್ಷಣ ಇಲಾಖೆ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಆದೇಶದಲ್ಲಿ ವಾರಕ್ಕೆ ಗರಿಷ್ಠ 8/9/9 ಘಂಟೆಗಳ ಕಾರ್ಯಭಾರಕ್ಕೆ ಬದಲಾಗಿ, ವಾರಕ್ಕೆ ಗರಿಷ್ಠ 15/17/14 ಘಂಟೆಗಳ ಕಾರ್ಯಭಾರವನ್ನು ನಿಗದಿಪಡಿಸಿ ಅವರುಗಳ ಮಾಸಿಕ ಗೌರವಧನವನ್ನು ಹೆಚ್ಚಿಸಲಾಗಿತ್ತು.ಆದರೆ ಮೇಲೆ ಓದಲಾದ ಕ್ರ.ಸಂ (2) ರ ಆದೇಶದಲ್ಲಿ ಹೆಚ್ಚಿಸಿದ ಗೌರವ ಧನವನ್ನು ಉಲ್ಲೇಖ (3) ರ ಆದೇಶದಲ್ಲಿ ಸೇರ್ಪಡೆ ಮಾಡಿರಲಿಲ್ಲ. ಆದರೆ ಉನ್ನತ ಶಿಕ್ಷಣ ಇಲಾಖೆಯ ಅಡಿಯಲ್ಲಿನ ಕಾಲೇಜು ಶಿಕ್ಷಣ ಇಲಾಖೆಯ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಹೆಚ್ಚುವರಿ ಗೌರವಧನವನ್ನು ನೀಡಲಾಗುತ್ತಿದೆ. ಅದೇ ಮಾದರಿಯಲ್ಲಿ ಇವರಿಗೂ ಸಹ ಹೆಚ್ಚುವರಿ ಗೌರವಧನ ಪಾವತಿಸುವುದು ಸೂಕ್ತವೆಂದು ಸರ್ಕಾರವು ಭಾವಿಸಿದೆ.

ಕಾಲೇಜು ಶಿಕ್ಷಣ ಇಲಾಖೆಯ ಅಡಿಯಲ್ಲಿ ಗೌರವಧನದ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರನ್ನು 'ಅತಿಥಿ ಉಪನ್ಯಾಸಕರು' ಎಂದು ಪದನಾಮೀಕರಿಸಿದ್ದು, ಏಕರೂಪತೆಯ ಉದ್ದೇಶದಿಂದ ತಾಂತ್ರಿಕ ಶಿಕ್ಷಣ ಇಲಾಖೆ ಅಡಿಯಲ್ಲಿನ ಅರೆಕಾಲಿಕ ಉಪನ್ಯಾಸಕರನ್ನು ಸಹ ಅತಿಥಿ ಉಪನ್ಯಾಸಕರೆಂದು ಪದನಾಮೀಕರಿಸುವುದು ಸೂಕ್ತವಾಗಿರುತ್ತದೆ.



File No. ED/64/TGL/2025-ED_SO_TECH-EDUCATION HIGHER SEC (Computer No. 1862379)
Scanned with OKEN Scanner
Generated from eOffice by PRUTHVIRAJ M.R, ED-ASST-TECH(MRP), ASSISTANT, EDUCATION HIGHER DEPARTMENT

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ, ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್‌ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಅವರುಗಳ ವಿದ್ಯಾರ್ಹತೆ, ಸೇವಾನುಭವ ಮತು ಕಾರ್ಯಭಾರಕ್ಕೆ ಅನುಗುಣವಾಗಿ ಕೆಲವೊಂದು ಷರತ್ತುಗಳನ್ನು ಸೇರ್ಪಡೆ / ಮಾರ್ಪಾಟು ಮಾಡಿ ಮಾಸಿಕ ಗೌರವಧನವನ್ನು ಪರಿಷ್ಕರಿಸಿ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಇಡಿ 122 ಡಿಟಿಇ 2023</u>**
**<u>ಬೆಂಗಳೂರು, ದಿನಾಂಕ:27ನೇ ಸೆಪ್ಟೆಂಬರ್ 2024</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್‌ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಸರ್ಕಾರದ ಆದೇಶ ಸಂಖ್ಯೆ:ಇಡಿ 122 ಡಿಟಿಇ 2023, ದಿನಾಂಕ:12.08.2024ರಲ್ಲಿ ನಿಗದಿಪಡಿಸಿರುವ ಗೌರವಧನದ ಜೊತೆಗೆ ಸರ್ಕಾರದ ಆದೇಶ ಸಂಖ್ಯೆ:ಇಡಿ 52 ಡಿಟಿಇ 2024, ದಿನಾಂಕ:04.03.2024 ರಲ್ಲಿ ನೀಡಲಾಗಿದ್ದ ಹೆಚ್ಚುವರಿ ಗೌರವಧನವನ್ನು**ಅನುಬಂಧ**ದಲ್ಲಿರುವಂತೆ ನಿಗಧಿಪಡಿಸಿ ಕೆಳಕಂಡ ಷರತ್ತುಗಳನ್ನು ಸೇರ್ಪಡೆಗೊಳಿಸಿಆದೇಶಿಸಿದೆ.

**<u>ಷರತ್ತುಗಳು:</u>**

1. ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುವ ಅತಿಥಿ ಉಪನ್ಯಾಸಕರಿಗೆ ಕ್ರಮವಾಗಿ ವಾರಕ್ಕೆ ಗರಿಷ್ಠ 15/17/14 ಗಂಟೆಗಳ ಕಾರ್ಯಭಾರ ಲಭ್ಯವಿಲ್ಲದಿದ್ದರೆ, ಅಂತಹ ಅತಿಥಿ ಉಪನ್ಯಾಸಕರಿಗೆ ಕಾರ್ಯಭಾರವಿರುವ ಇತರೆ ಸರ್ಕಾರಿ ಇಂಜಿನಿಯರಿಂಗ್‌ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಅಥವಾ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸಲು ಸೂಚಿಸುವುದು. ನಿಗಧಿಪಡಿಸಿದ ಕಾರ್ಯಭಾರಕ್ಕಿಂತ ಕಡಿಮೆ ಕಾರ್ಯಭಾರವಿದ್ದರೆ, ಲಭ್ಯವಿರುವ ಕಾರ್ಯಭಾರದ ಪ್ರಮಾಣಕ್ಕೆ ಅನುಗುಣವಾಗಿ ಗೌರವಧನ ನೀಡುವುದು.

2. ಅತಿಥಿ ಉಪನ್ಯಾಸಕರನ್ನು ಪ್ರತೀ ಶೈಕ್ಷಣಿಕ ವರ್ಷದಲ್ಲಿ 10 ತಿಂಗಳಿಗೆ ಮಾತ್ರ ನೇಮಕ ಮಾಡುವುದು.

3. ಎ.ಐ.ಸಿ.ಟಿ.ಇ ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರಿಗೆ ನಿಗದಿತ ವಿದ್ಯಾರ್ಹತೆಯನ್ನು ಹೊಂದಲು 4 ವರ್ಷಗಳ ಕಾಲಾವಧಿ ನೀಡುವುದು. 4 ವರ್ಷಗಳ ನಂತರ ಎ.ಐ.ಸಿ.ಟಿ.ಇ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರ ನೇಮಕಾತಿಯನ್ನು ಸಂಪೂರ್ಣವಾಗಿ ನಿರ್ಬಂಧಿಸುವುದು.

ಮುಂದುವರಿದು, ಸರ್ಕಾರದ ಆದೇಶ ಸಂಖ್ಯೆ:ಇಡಿ 122 ಡಿಟಿಇ 2023, ದಿನಾಂಕ:12.08.2024ರಲ್ಲಿ 'ಅರೆಕಾಲಿಕ ಉಪನ್ಯಾಸಕರು' ಎಂದು ನಮೂದಿಸಿರುವುದನ್ನು ಈ ಆದೇಶದ ಮೂಲಕ 'ಅತಿಥಿ ಉಪನ್ಯಾಸಕರು' ಎಂದು ಪದನಾಮೀಕರಿಸಿದೆ.


le No. ED/64/TGL/2025-ED_SO_TECH-EDUCATION HIGHER SEC (Computer No. 1862379)
enerated from eOffice by PRUTHVIRAJ M R, ED-ASST-TECH(MRP), ASSISTANT, EDUCATION HIGHER DEPARTMENT on 07/08/2025 03:17 PM
Scanned with OKEN Scanner

ಈ ಆದೇಶದಲ್ಲಿ ನಿಗಧಿಪಡಿಸಿರುವ ಗೌರವಧನದ ಆರ್ಥಿಕ ಸೌಲಭ್ಯವು ದಿನಾಂಕ:12.08.2024ರಿಂದ ಅನ್ವಯವಾಗುವಂತೆ ಜಾರಿಯಾಗತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

…/9/2024

(ಮಹಾಂತಪ್ಪ ಎಸ್.ತುರಕನೂರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ
(ತಾಂತ್ರಿಕ ಶಿಕ್ಷಣ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ (ಎ ಮತ್ತು ಇ), (ಎ ಮತ್ತು ಎಸ್.ಎಸ್.ಎ) ಮತ್ತು (ಇ ಮತ್ತು ಆರ್.ಎಸ್.ಎ), ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
5. ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು/ಪಾಲಿಟೆಕ್ನಿಕ್‌ಕಾಲೇಜುಗಳು/ ಕಿರಿಯ ತಾಂತ್ರಿಕ ಶಾಲೆಗಳಿಗೆ (ಆಯುಕ್ತಾಲಯದ ಮುಖಾಂತರ)
6. ಇ-ಆಡಳಿತ ಮಾಹಿತಿ ಕೇಂದ್ರ, ಉನ್ನತ ಶಿಕ್ಷಣ ಇಲಾಖೆ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು)
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

**ಪ್ರತಿಗಳು:**

1. ಸನ್ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ
4. ಉನ್ನತ ಶಿಕ್ಷಣ ಇಲಾಖೆಯ ಸರ್ಕಾರದ ಎಲ್ಲಾ ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರು,

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ
ಆಪ್ತ ಶಾಖೆ
ಸಂಖ್ಯೆ
ದಿನಾಂಕ 14 OCT 2024

ದಿನಾಂಕ 1/10/24
ಶಿಕ್ಷಣ ಇಲಾಖೆ

14/10/24



File No. ED/64/TGL/2025-ED_SO_TECH-EDUCATION HIGHER SEC (Computer No. 1862379)
Scanned with OKEN Scanner
Generated from eOffice by PRUTHVIRAJ M R, ED-ASST-TECH(MRP), ASSISTANT, EDUCATION HIGHER DEPARTMENT

## ಅನುಬಂಧ

ಭಾಗ-1

| ಕ್ರಮ ಸಂಖ್ಯೆ | ವಿವರ | ಸರ್ಕಾರಿ ಇಂಜಿನಿಯರಿಂಗ್‌ಕಾಲೇಜುಗಳ ಅತಿಥಿ ಉಪನ್ಯಾಸಕರಿಗೆ ನಿಗದಿಪಡಿಸಿರುವ ಗೌರವಧನ | ಸರ್ಕಾರಿ ಪಾಲಿಟೆಕ್ನಿಕ್‌ಗಳ ಅತಿಥಿ ಉಪನ್ಯಾಸಕರಿಗೆ ನಿಗದಿಪಡಿಸಿರುವ ಗೌರವಧನ | ಹೆಚ್ಚುವರಿ ಗೌರವಧನ |
|---|---|---|---|---|
| 1 | 15 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 32000/- | 28000/- | 8000/- |
| 2 | 10 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 32000/- | 28000/- | 7000/- |
| 3 | 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 32000/- | 28000/- | 6000/- |
| 4 | 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 30000/- | 26000/- | 5000/- |
| 5 | 15 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 28000/- | 24000/- | 8000/- |



ile No. ED/64/TGL/2025-ED_SO_TECH-EDUCATION HIGHER SEC (Computer No. 1862379)
enerated from eOffice by PRUTHVIRAJ M R, ED-ASST-TECH(MRP), ASSISTANT, EDUCATION HIGHER DEPARTMENT on 07/08/2025 03:17 PM
Scanned with OKEN Scanner

| | | | | |
|---|---|---|---|---|
| 6 | 10 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 28000/- | 24000- | 7000/- |
| 7 | 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 28000/- | 24000/- | 6000/- |
| 8 | 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 26000/- | 22000/- | 5000/- |

**ಭಾಗ-2**

| ಕ್ರಮ ಸಂಖ್ಯೆ | ವಿವರ | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಅತಿಥಿ ಉಪನ್ಯಾಸಕರಿಗೆ ನಿಗದಿಪಡಿಸಿರುವ ಗೌರವಧನ | ಹೆಚ್ಚುವರಿ ಗೌರವಧನ |
|---|---|---|---|
| 1 | 15 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಸೇವೆ ಸಲ್ಲಿಸಿದ ಅತಿಥಿ ಉಪನ್ಯಾಸಕರಿಗೆ | ರೂ.18000/- | ರೂ.8000/- |
| 2 | 10 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಸೇವೆ ಸಲ್ಲಿಸಿದ ಅತಿಥಿ ಉಪನ್ಯಾಸಕರಿಗೆ | | ರೂ.7000/- |
| 3 | 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಸೇವೆ ಸಲ್ಲಿಸಿದ ಅತಿಥಿ ಉಪನ್ಯಾಸಕರಿಗೆ | | ರೂ.6000/- |
| 4 | 5 ವರ್ಷಕ್ಕಿಂತ ಕಡಿಮೆ ಅವಧಿಗೆ ಸೇವೆ ಸಲ್ಲಿಸಿದ ಅತಿಥಿ ಉಪನ್ಯಾಸಕರಿಗೆ | | ರೂ.5000/- |

29/11/2024

(ಮಹಾಂತೇಶಪ್ಪ ಎಸ್.ತುರಕಸೂರ)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ
(ತಾಂತ್ರಿಕ ಶಿಕ್ಷಣ)



File No. ED/64/TGL/2025-ED_SO_TECH-EDUCATION HIGHER SEC (Computer No. 1862379)
Scanned with OKEN Scanner
Generated from eOffice by PRUTHVIRAJ M R, ED-ASST-TECH(MRP), ASSISTANT, EDUCATION HIGHER DEPARTMENT on 07/08/2025 03:17 PM